All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು

**ರಾಷ್ಟ್ರೀಯ ವಾರ್ತೆಗಳು**

**24.02.2026** **19.35 p.m.**

***************

ಮುಖ್ಯಾಂಶಗಳು

- ಕಚ್ಚಾ ಸೆಣಬಿನ ಕನಿಷ್ಠ ಬೆಂಬಲ ಬೆಲೆ ಹೆಚ್ಚಳ ಸೇರಿ ಹಲವು ಮಹತ್ವದ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಪ್ರಧಾನಿ ನರೇಂದ್ರ ಮೋದಿ ಅವರು ನಾಳೆಯಿಂದ ಇಸ್ರೇಲ್‌ಗೆ ಎರಡು ದಿನಗಳ ಅಧಿಕೃತ ಭೇಟಿ
- ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ; ಜಾರ್ಖಂಡ್, ಒಡಿಶಾದ ನ್ಯಾಯಾಧೀಶರ ನಿಯೋಜನೆಗೆ ಸುಪ್ರೀಂಕೋರ್ಟ್ ಅನುಮತಿ
- ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೂಪರ್ ೮ರ ಹಂತದ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಟಾಸ್ ಗೆದ್ದ ಪಾಕಿಸ್ತಾನ ಬ್ಯಾಟಿಂಗ್ ಆಯ್ಕೆ

***************

ಸೇವಾ ತೀರ್ಥವನ್ನು ಸೂಕ್ಷ್ಮ, ಜವಾಬ್ದಾರಿಯುತ ಮತ್ತು ನಾಗರಿಕ ಕೇಂದ್ರೀತ ಆಡಳಿತದ ಜಾಗತಿಕ ಉದಾಹರಣೆಯನ್ನಾಗಿ ಮಾಡುವ ತನ್ನ ಬದ್ಧತೆಯನ್ನು ಕೇಂದ್ರ ಸಚಿವ ಸಂಪುಟ ಇಂದು ಪುನರುಚ್ಚರಿಸಿತು.

ಸಚಿವ ಸಂಪುಟ ಸಭೆಯ ನಂತರ ನವದೆಹಲಿಯಲ್ಲಿಂದು ಈ ಕುರಿತು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಇಂದು ಸೇವಾ ತೀರ್ಥದಲ್ಲಿ ನಡೆದ ಮೊದಲ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ಸೇವಾ ಸಂಕಲ್ಪ ನಿರ್ಣಯದಲ್ಲಿ ೨೦೪೭ರ ವೇಳೆಗೆ ಭಾರತವನ್ನು ಸಮೃದ್ಧ, ಸಮರ್ಥ ಮತ್ತು ಸ್ವಾವಲಂಬಿ ರಾಷ್ಟ್ರವನ್ನಾಗಿಸುವ ಪ್ರಯಾಣದಲ್ಲಿ ಈ ಪ್ರಮೇಯವು ರಾಷ್ಟ್ರೀಯ ಆಕಾಂಕ್ಷೆಗಳ ಪ್ರಬಲ ಕೇಂದ್ರಗಳಾಗಿ ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ಇದೇ ವೇಳೆ, ಕೇರಳ ರಾಜ್ಯದ ಹೆಸರನ್ನು 'ಕೇರಳಂ' ಎಂದು ಬದಲಾಯಿಸುವ ಪ್ರಸ್ತಾವನೆಯನ್ನು ಸಚಿವ ಸಂಪುಟ ಅನುಮೋದನೆ ನೀಡಿದೆ. ರಾಷ್ಟ್ರಪತಿಗಳು ಕೇರಳ ಹೆಸರಿನ ಬದಲಾವಣೆ ಮಸೂದೆ ೨೦೨೬ ಅನ್ನು ತನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಕೇರಳ ರಾಜ್ಯ ವಿಧಾನಸಭೆಗೆ

ಉಲ್ಲೇಖಿಸುತ್ತಾರೆ. ಬಳಿಕ ಕೇರಳ ರಾಜ್ಯ ಶಾಸಕಾಂಗ ಸಭೆಯ ಅಭಿಪ್ರಾಯಗಳನ್ನು ಸ್ವೀಕರಿಸಿದ ನಂತರ ಭಾರತ ಸರ್ಕಾರವು ಮುಂದಿನ ಕ್ರಮ ಕೈಗೊಳ್ಳುತ್ತದೆ ಎಂದು ತಿಳಿಸಿದರು.

ಮಹಾರಾಷ್ಟ್ರ, ಮಧ್ಯಪ್ರದೇಶ, ಬಿಹಾರ ಮತ್ತು ಜಾರ್ಖಂಡ್‌ನಾದ್ಯಂತ ೮ ಜಿಲ್ಲೆಗಳನ್ನು ಒಳಗೊಂಡ ಮೂರು ಹಳಿಗಳ ರೈಲ್ವೆ ಯೋಜನೆಗಳಿಗೆ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿಯು ಅನುಮೋದನೆ ನೀಡಿದೆ. ಅಂದಾಜು ೯ ಸಾವಿರದ ೭೭ ಕೋಟಿ ರೂಪಾಯಿ ವೆಚ್ಚದಲ್ಲಿ ೨೦೩೦-೩೧ರ ವೇಳೆಗೆ ಈ ಯೋಜನೆಗಳು ಪೂರ್ಣಗೊಳ್ಳಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಇದೇ ವೇಳೆ, ಶ್ರೀನಗರ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಒಟ್ಟು ೧ ಸಾವಿರದ ೬೭೭ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ಸಿವಿಲ್ ಎನ್‌ಕ್ಲೇವ್ ಅಭಿವೃದ್ಧಿಗೆ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ಅನುಮತಿ ನೀಡಿದೆ. ಅಲ್ಲದೇ, ಗುಜರಾತ್ ಮೆಟ್ರೋ ರೈಲು ನಿಗಮ ಲಿಮಿಟೆಡ್‌ನ ಗಿಫ್ಟ್ ಸಿಟಿಯಿಂದ ಶಹಪುರದವರೆಗೆ ಅಸ್ತಿತ್ವದಲ್ಲಿರುವ ಉತ್ತರ-ದಕ್ಷಿಣ ಕಾರಿಡಾರ್ ಅನ್ನು ವಿಸ್ತರಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಅವರು ವಿವರಿಸಿದರು.

೨೦೨೬-೨೭ನೇ ಸಾಲಿನ ಮಾರುಕಟ್ಟೆ ಋತುವಿನಲ್ಲಿ ಕಚ್ಚಾ ಸೆಣಬಿನ ಕನಿಷ್ಠ ಬೆಂಬಲ ಬೆಲೆಗಳನ್ನು ಸಚಿವ ಸಂಪುಟ ಅನುಮೋದಿಸಿದೆ. ಕ್ವಿಂಟಾಲ್‌ಗೆ ೫ ಸಾವಿರದ ೯೨೫ ರೂಪಾಯಿಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ನಿಗದಿಪಡಿಸಲಾಗಿದೆ. ಹಿಂದಿನ ಮಾರುಕಟ್ಟೆ ಋತುವಿಗೆ ಹೋಲಿಸಿದರೆ, ಈ ಋತುವಿನಲ್ಲಿ ಕ್ವಿಂಟಾಲ್‌ಗೆ ೨೭೫ ರೂಪಾಯಿಗಳ ಹೆಚ್ಚಳವಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

ಧ್ವನಿ: ಸಚಿವ ಅಶ್ವಿನಿ ವೈಷ್ಣವ್

***************

ಮಹಾರಾಷ್ಟ್ರದ ಮುಂಬೈನ ಲೋಕಭವನದಲ್ಲಿಂದು ಪಿಡಿ ಹಿಂದೂಜಾ ಆಸ್ಪತ್ರೆಯು ಆಯೋಜಿಸಿದ್ದ 'ಜೀವಗಳನ್ನು ಉಳಿಸುವುದು ಮತ್ತು ಆರೋಗ್ಯಕರ ಭಾರತವನ್ನು ನಿರ್ಮಿಸುವುದು' ಎಂಬ ರಾಷ್ಟ್ರವ್ಯಾಪಿ ಅಭಿಯಾನವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು.

ಇದಕ್ಕೂ ಮುನ್ನ ಎರಡು ದಿನಗಳ ಮಹಾರಾಷ್ಟ್ರ ಭೇಟಿಗಾಗಿ ಇಂದು ಮಧ್ಯಾಹ್ನ ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ರಾಷ್ಟ್ರಪತಿ ಅವರನ್ನು ರಾಜ್ಯಪಾಲ ಆಚಾರ್ಯ ದೇವವ್ರತ್ ಬರಮಾಡಿಕೊಂಡರು. ಈ ವೇಳೆ, ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಮತ್ತು ಸುನೇತ್ರಾ ಅಜಿತ್ ಕುಮಾರ್ ಉಪಸ್ಥಿತರಿದ್ದರು.

ನಾಳೆ ರಾಷ್ಟ್ರಪತಿ ಅವರು ಬುಲ್ಡಾನಾ ಜಿಲ್ಲೆಯ ಶೇಗಾಂವ್‌ನಲ್ಲಿ ಕೇಂದ್ರ ಆಯುಷ್ ಇಲಾಖೆ ಆಯೋಜಿಸಿರುವ 'ರಾಷ್ಟ್ರೀಯ ಆರೋಗ್ಯ ಮೇಳ ೨೦೨೫' ಅನ್ನು ಉದ್ಘಾಟಿಸಲಿದ್ದಾರೆ. ಬಳಿಕ ಅವರು ನಾಗ್ಪುರದಲ್ಲಿ ಅವರು ಬ್ರಹ್ಮಕುಮಾರಿಸ್ ಸಂಸ್ಥೆ ಆಯೋಜಿಸಿರುವ ರಾಜ್ಯ ಮಟ್ಟದ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ.

****************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆಯಿಂದ ಇಸ್ರೇಲ್‌ಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಇದು ಇಸ್ರೇಲ್‌ಗೆ ಪ್ರಧಾನಿಯವರ ಎರಡನೇ ಭೇಟಿಯಾಗಲಿದೆ.

ಭೇಟಿಯ ಸಮಯದಲ್ಲಿ, ಪ್ರಧಾನಿಯವರು, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರನ್ನು ಭೇಟಿ ಮಾಡಲಿದ್ದಾರೆ. ಭಾರತದಲ್ಲಿ ಆಗಿರುವ ಮಹತ್ವದ ಪ್ರಗತಿ, ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಉಭಯ ನಾಯಕರು ಪರಿಶೀಲಿಸಲಿದ್ದಾರೆ. ವಿಜ್ಞಾನ ಮತ್ತು ತಂತ್ರಜ್ಞಾನ, ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ಕೃಷಿ, ನೀರು ನಿರ್ವಹಣೆ, ವ್ಯಾಪಾರ ಮತ್ತು ಆರ್ಥಿಕತೆ ಹಾಗೂ ಜನರಿಂದ ಜನರಿಗೆ ವಿನಿಮಯ ಸೇರಿದಂತೆ ಸಹಕಾರದ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಅವಕಾಶಗಳನ್ನು ಅವರು ಚರ್ಚಿಸಲಿದ್ದಾರೆ.

ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ನಾಯಕರು ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ.

ಇದೇ ವೇಳೆ ಪ್ರಧಾನಿ ಮೋದಿ ಅವರು ಇಸ್ರೇಲ್ ಅಧ್ಯಕ್ಷ ಐಸಾಕ್ ಹೆರ್ಜಾಗ್ ಅವರನ್ನು ಸಹ ಭೇಟಿ ಮಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

****************

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯಡಿ ೮೦ ಲಕ್ಷ ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ನಿಭಾಯಿಸಲು ನೆರೆಯ ಜಾರ್ಖಂಡ್ ಮತ್ತು ಒಡಿಶಾದ ಸಿವಿಲ್ ನ್ಯಾಯಾಧೀಶರು ಮತ್ತು ನ್ಯಾಯಾಂಗ ಅಧಿಕಾರಿಗಳನ್ನು ನಿಯೋಜಿಸುವಂತೆ ಕಲ್ಕತ್ತಾ ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರಿಗೆ ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ.

ಪರಿಶೀಲನಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ೨೫೦ ಜಿಲ್ಲಾ ನ್ಯಾಯಾಧೀಶರಿಗೆ ಸುಮಾರು ೮೦ ದಿನಗಳು ಬೇಕಾಗುತ್ತದೆ ಎಂದು ಕಲ್ಕತ್ತಾ ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರು ಬರೆದ ಪತ್ರವನ್ನು ಸುಪ್ರೀಂ ಕೋರ್ಟ್ ಮುಖ್ಯನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ನ್ಯಾಯಪೀಠ ಪರಿಗಣಿಸಿದೆ.

ಸಮಯದ ನಿರ್ಬಂಧಗಳನ್ನು ಪರಿಗಣಿಸಿ, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನಿಯೋಜನೆಗೆ ಸುಪ್ರಿಂ ಕೋರ್ಟ್ ಅನುಮತಿ ನೀಡಿದೆ. ಎರಡೂ ರಾಜ್ಯಗಳಿಂದ ಅಧಿಕಾರಿಗಳನ್ನು ನಿಯೋಜಿಸುವ ವೆಚ್ಚವನ್ನು ಭರಿಸುವಂತೆ ನ್ಯಾಯಾಲಯವು ಚುನಾವಣಾ ಆಯೋಗಕ್ಕೆ ನಿರ್ದೇಶಿಸಿದೆ.

****************

ಉತ್ತರ ಕಾಶಿಯ ನೆಹರು ಪರ್ವತಾರೋಹಣ ಸಂಸ್ಥೆ ಮತ್ತು ಪಹಲ್ಗಾಮ್‌ನ ಜವಹರ್ ಪರ್ವತಾರೋಹಣ ಸಂಸ್ಥೆ ಹಾಗೂ ವಿಂಟರ್ ಸ್ಪೋರ್ಟ್ಸ್‌ನ ೭ ಸದಸ್ಯರ ತಂಡವು ಅರ್ಜೆಂಟೀನಾದ ಮೌಂಟ್ ಅಕಾನ್‌ಕಾಗುವಾವನ್ನು ಯಶಸ್ವಿಯಾಗಿ ಏರಿತು.

ಈ ತಿಂಗಳ ೫ ರಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಪರ್ವತಾರೋಹಣಕ್ಕೆ ಚಾಲನೆ ನೀಡಿದ್ದರು.

ಮೌಂಟ್ ಅಕಾನ್‌ಕಾಗುವಾ ದಕ್ಷಿಣ ಅಮೆರಿಕಾದಲ್ಲಿ ಅತಿ ಎತ್ತರದ ಶಿಖರವಾಗಿದೆ. ಏಷ್ಯಾದ ಹೊರಗೆ ವಿಶ್ವದ ಎರಡನೇ ಅತಿ ಎತ್ತರದ ಶಿಖರವಾಗಿದೆ. ಈ ಸಾಧನೆಗಾಗಿ ತಂಡವನ್ನು ಹಾಗೂ ಪರ್ವತಾರೋಹಣ ಸಂಸ್ಥೆಗಳನ್ನು ರಕ್ಷಣಾ ಸಚಿವಾಲಯ ಅಭಿನಂದಿಸಿದೆ.

****************

ತೆಲಂಗಾಣದ ಹೈದರಾಬಾದ್‌ನಲ್ಲಿ ಇಂದು ನಾಲ್ವರು ನಕ್ಸಲ್ ನಾಯಕರು ಪೊಲೀಸರ ಮುಂದೆ ಶರಣಾಗಿದ್ದಾರೆ.

ನಕ್ಸಲ್ ಪಾಲಿಟ್‌ಬ್ಯೂರೋ ಸದಸ್ಯ ತಿಪ್ಪಿರಿ ತಿರುಪತಿ ದೇವುಜಿ, ಕೇಂದ್ರ ಸಮಿತಿ ಸದಸ್ಯ ಮಲ್ಲಾ ರಾಜಿ ರೆಡ್ಡಿ ಸಂಗ್ರಾಮ್, ತೆಲಂಗಾಣ ರಾಜ್ಯ ಸಮಿತಿ ಕಾರ್ಯದರ್ಶಿ ಬಡೇ ಚೊಕ್ಕ ರಾವ್ ದಾಮೋದರ್ ಮತ್ತು ರಾಜ್ಯ ಸಮಿತಿ ಸದಸ್ಯ ನೂನೆ ನರಸಿಂಹ ರೆಡ್ಡಿ ಗಂಗಣ್ಣ ಅವರು ತೆಲಂಗಾಣ ಡಿಜಿಪಿ ಬಿ.ಶಿವಧರ್ ರೆಡ್ಡಿ ಅವರ ಮುಂದೆ ಶರಣಾಗಿದ್ದಾರೆ.

ಶರಣಾದ ನಕ್ಸಲರಿಗೆ ತಲಾ ೨೫ ಲಕ್ಷ ರೂಪಾಯಿಗಳ ಚೆಕ್ ಅನ್ನು ಡಿಜಿಪಿ ಹಸ್ತಾಂತರಿಸಿದ್ದಾರೆ. ಅಲ್ಲದೇ ಇವರು ಭದ್ರತೆ ಮತ್ತು ಪುನರ್ವಸತಿ ಖಾತರಿಗಳನ್ನು ಸಹ ಪಡೆಯಲಿದ್ದಾರೆ.

****************

ಪಾಕಿಸ್ತಾನದ ಖೈಬರ್ ಪಖ್ತುನ್ವಾ ಪ್ರಾಂತ್ಯದ ಕೊಹತ್ ಜಿಲ್ಲೆಯಲ್ಲಿ ಇಂದು ಪೊಲೀಸ್ ವಾಹನದ ಮೇಲೆ ಉಗ್ರರು ನಡೆಸಿದ ದಾಳಿಯಲ್ಲಿ ಆರು ಪೊಲೀಸರು ಸಾವನ್ನಪ್ಪಿದ್ದು, ಒಬ್ಬರು ಗಾಯಗೊಂಡಿದ್ದಾರೆ.

ಶಕರ್ದಾರ ರಸ್ತೆಯಲ್ಲಿ ಈ ದಾಳಿ ನಡೆದಿದ್ದು, ದಾಳಿಕೋರರು ಪೊಲೀಸ್ ವಾಹನದ ಮೇಲೆ ಹೊಂಚು ಹಾಕಿ ದಾಳಿ ನಡೆಸಿದ್ದರಿಂದ ಸಾವು-ನೋವುಗಳು ಸಂಭವಿಸಿವೆ. ದಾಳಿಯ ನಂತರ ದಾಳಿಕೋರರು ಪೊಲೀಸ್ ವಾಹನವನ್ನು ಸಹ ಸುಟ್ಟುಹಾಕಿ, ಸ್ಥಳದಿಂದ ಪರಾರಿಯಾಗಿದ್ದಾರೆ. ದಾಳಿಯ ನಂತರ ಆ ಪ್ರದೇಶಕ್ಕೆ ಪೊಲೀಸ್ ತುಕಡಿಯನ್ನು ನಿಯೋಜಿಸಲಾಗಿದೆ ಎಂದು ಸ್ಥಳೀಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

****************

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಸೂಪರ್ ೮ರ ಹಂತದ ೨ನೇ ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದು, ಮೊದಲು ಬ್ಯಾಟಿಂಗ್ ಮಾಡುತ್ತಿರುವ ಪಾಕಿಸ್ತಾನ ತಂಡ, ಇತ್ತೀಚಿನ ವರದಿ ಬಂದಾಗ ೬.೧ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೪೬ ರನ್ ಗಳಿಸಿ ಆಡುತ್ತಿದೆ.

****************

ಕರ್ನಾಟಕದ ಹುಬ್ಬಳ್ಳಿಯ ಕೆ.ಎಸ್.ಸಿ.ಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಪ್ರಸಕ್ತ ಸಾಲಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದಲ್ಲಿ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮೊದಲು ಬ್ಯಾಟಿಂಗ್ ಮಾಡುತ್ತಿರುವ ಜಮ್ಮು-ಕಾಶ್ಮೀರ ತಂಡ ಮೊದಲ ದಿನದಾಂತ್ಯಕ್ಕೆ ಎರಡು ವಿಕೆಟ್ ನಷ್ಟಕ್ಕೆ ೨೮೪ ರನ್ ಗಳಿಸಿದೆ. ನಾಳೆ ಎರಡನೇ ದಿನದಾಟ ಮುಂದುವರೆಯಲಿದೆ.

****************

ಆಸ್ಟ್ರೇಲಿಯಾ ಬ್ರಿಸ್‌ಬೇನ್‌ನಲ್ಲಿ ನಡೆದ ಮಹಿಳಾ ಏಕದಿನ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ ವನಿತಾ ತಂಡದ ವಿರುದ್ಧ ಆಸ್ಟ್ರೇಲಿಯಾ ೬ ವಿಕೆಟ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ಭಾರತ ೪೮.೩ ಓವರ್‌ಗಳಲ್ಲಿ ೨೧೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು.

ಗೆಲುವಿನ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ, ೩೮.೨ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೧೬ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

ಆಸ್ಟ್ರೇಲಿಯಾ ಪರ ೭೯ ಎಸೆತಗಳಿಗೆ ೭೭ ರನ್ ಗಳಿಸಿದ ಬೆತ್ ಮೂನಿ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾಗಿದ್ದಾರೆ.

****************

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೧ ಸಾವಿರದ ೭೯ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೨ ಸಾವಿರದ ೨೨೬ ಅಂಕಗಳು ದಾಖಲಾಗಿದೆ.

ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೮೮ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೪೨೫ ಅಂಕಗಳು ದಾಖಲಾಗಿದೆ.

ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೦ ರೂಪಾಯಿ ೯೫ ಪೈಸೆಯಷ್ಟಾಗಿದೆ.

********ಮುಕ್ತಾಯ********